**ಶ್ರೀ ಮರಿತಿಬ್ಬೇಗೌಡ, ಮಾನ್ಯ ವಿಧಾನ ಪರಿಷತ್ ಸದಸ್ಯರು ರವರು ನಿಯಮ 330 ರಡಿ ಕೋರಿರುವ ಪ್ರಶ್ನೆಗೆ ಉತ್ತರ**

*****

**ಪ್ರಶ್ನೆ:**

ಅನುದಾನ ರಹಿತ, ಅನುದಾನಿತ ಹಾಗೂ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಹಾಗೂ ಇತರೆ ಕಾಲೇಜುಗಳಲ್ಲಿ ವ್ಯಾಸಂಗ ಮಾಡುವ ಎಸ್.ಸಿ/ಎಸ್.ಟಿ. ಹಾಗೂ ಓ.ಬಿ.ಸಿ. ವಿದ್ಯಾರ್ಥಿಗಳಿಗೆ ಸಮಾಜ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ನೀಡಲಾಗುವ ಶುಲ್ಕ ವಿನಾಯಿತಿ ಹಣವಾದ ಪ್ರವೇಶ, ಪರೀಕ್ಷೆ, ಬೋಧನೆ ಹಾಗೂ ಇತರೆ ಶುಲ್ಕಗಳನ್ನು ಆಯಾ ಕಾಲೇಜಿನ ಪ್ರಾಂಶುಪಾಲರ ಖಾತೆಗೆ ಇಲಾಖೆ ಮರು ಪಾವತಿ ಮಾಡದೆ, ಕಳೆದ ಎರಡು ವರ್ಷಗಳಿಂದ ವಿದ್ಯಾರ್ಥಿಗಳ ಖಾತೆಗೆ ನೇರವಾಗಿ ಜಮಾ ಮಾಡುತ್ತಿರುವುದರಿಂದ ಕಾಲೇಜಿಗೆ ಬರಬೇಕಾದ ಶುಲ್ಕಗಳು ವಿದ್ಯಾರ್ಥಿಗಳಿಂದ ಸಂಸ್ಥೆಗಳಿಗೆ ಪಾವತಿಯಾಗುತ್ತಿಲ್ಲ. ಇದರಿಂದ ಕಾಲೇಜುಗಳ ನಿರ್ವಹಣೆಯು ತುಂಬಾ ಕಷ್ಟದಾಯಕವಾಗಿರುವ ಗಂಭೀರ ಸಮಸ್ಯೆ ಕುರಿತು.

**ಉತ್ತರ:**

1) ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಕುಟುಂಬದ ವಾರ್ಷಿಕ ಆದಾಯ ರೂ. 2.50 ಲಕ್ಷದ ಮಿತಿಯಲ್ಲಿರುವ ಪ.ಜಾತಿಯ ವಿದ್ಯಾರ್ಥಿಗಳು ಉನ್ನತ ಶಿಕ್ಷಣ ಪಡೆಯಲು ಅನುಕೂಲವಾಗುವಂತೆ ಕೇಂದ್ರ ಪುರಸ್ಕೃತ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮವನ್ನು ಭಾರತ ಸರ್ಕಾರದ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಮಾರ್ಗಸೂಚಿಗಳನ್ವಯ ಮಂಜೂರು ಮಾಡಲಾಗುತ್ತಿದೆ.

2) 2018-19 ಹಾಗೂ ಪೂರ್ವದ ಸಾಲುಗಳಲ್ಲಿ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮವನ್ನು ಇಲಾಖೆಯ SMIS (Scholarship Management Information System) ತಂತ್ರಾಂಶದ ಮೂಲಕ ಅನುಷ್ಠಾನಗೊಳಿಸಲಾಗಿದೆ.

3) 2019-20ನೇ ಸಾಲಿನಿಂದ ಇ-ಆಡಳಿತ ಇಲಾಖೆಯ ವತಿಯಿಂದ ಅಭಿವೃದ್ಧಿಪಡಿಸಿ ನಿರ್ವಹಣೆ ಮಾಡಲಾಗುತ್ತಿರುವ ರಾಜ್ಯ ವಿದ್ಯಾರ್ಥಿವೇತನ ಪೋರ್ಟಲ್ (SSP) ತಂತ್ರಾಂಶದ ಮೂಲಕ ಅನುಷ್ಠಾನಗೊಳಿಸಲಾಗುತ್ತಿದೆ. ಮಂಜೂರು ಮಾಡಲಾದ ವಿದ್ಯಾರ್ಥಿವೇತನ ಮೊತ್ತವನ್ನು ಡಿ.ಬಿ.ಟಿ. ಪೋರ್ಟಲ್ ಮೂಲಕ ವಿದ್ಯಾರ್ಥಿಗಳ ಆಧಾರ್ ಜೋಡಿತ ಬ್ಯಾಂಕ್ ಖಾತೆಗೆ ನೇರವಾಗಿ ಜಮೆ ಮಾಡಲಾಗುತ್ತಿದೆ.

4) 2019-20 ಮತ್ತು 2020-21ನೇ ಸಾಲಿನಲ್ಲಿ ಮಂಜೂರಾದ ಶುಲ್ಕ ಮರುಪಾವತಿ ಮೊತ್ತದಲ್ಲಿ ವಿದ್ಯಾರ್ಥಿಯು ತಾನು ವ್ಯಾಸಂಗ ಮಾಡುತ್ತಿರುವ ಕಾಲೇಜಿಗೆ ಈಗಾಗಲೇ ಶುಲ್ಕ ಪಾವತಿ ಮಾಡಿದ್ದಲ್ಲಿ, ಸದರಿ ಮೊತ್ತವನ್ನು ವಿದ್ಯಾರ್ಥಿಯ ಖಾತೆಗೆ ಜಮೆ ಮಾಡಲು ಹಾಗೂ ಉಳಿದ ಮೊತ್ತವನ್ನು ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರ ಖಾತೆಗೆ ಜಮೆ ಮಾಡಲು ತಂತ್ರಾಂಶದಲ್ಲಿ ಅವಕಾಶ ಕಲ್ಪಿಸಲಾಗಿತ್ತು. ಈ ಸಂಬಂಧ ತಂತ್ರಾಂಶದಲ್ಲಿ ಇ-ದೃಢೀಕರಣ ವ್ಯವಸ್ಥೆಯನ್ನು ಅಳವಡಿಸಲಾಗಿದೆ. ಮುಂದುವರದು ಕಾಲೇಜಿನಲ್ಲಿ ಇ-ದೃಢೀಕರಣ ಅಧಿಕಾರಿಗಳನ್ನು ನೇಮಿಸಲಾಗಿದ್ದು, ಸದರಿ ಇ-ದೃಢೀಕರಣ ಅಧಿಕಾರಿಗಳು

ದೃಢೀಕರಣ ಮಾಡಿರುವ ದತ್ತಾಂಶಗಳಿಗೆ ಅನುಗುಣವಾಗಿ ಶುಲ್ಕ ಮರುಪಾವತಿ ಮೊತ್ತವನ್ನು ಜಮೆ ಮಾಡಲಾಗುತ್ತಿದೆ.

5) ಭಾರತ ಸರ್ಕಾರದ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಮಾರ್ಗಸೂಚಿ (2020-21 ರಿಂದ 2025-26ರ ವರೆಗೆ) ರ ಪುಟಸಂಖ್ಯೆ (11)ರ ಹಾಗೂ ಕ್ರಮ ಸಂಖ್ಯೆ (11) Payment Mechanism ನಲ್ಲಿ **11.1 The entire scholarship amount – both from State and Central Government – including the tuition fees, academic allowance and any other admissible allowance will be paid directly into the account of the students ONLY through DBT preferably through an Aadhar Based Payment System (Aadhar Payment Bridge) from 2021-22** ಎಂದು ತಿಳಿಸಲಾಗಿರುತ್ತದೆ.

6) ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮವು ಕೇಂದ್ರ ಪುರಸ್ಕೃತ ಕಾರ್ಯಕ್ರಮವಾಗಿದ್ದು, ಶೇಕಡ 60ರಷ್ಟು ಮೊತ್ತವನ್ನು ಕೇಂದ್ರ ಸರ್ಕಾರವೇ ಪಾವತಿಸುತ್ತಿರುವುದರಿಂದಲೂ ಹಾಗೂ ರಾಜ್ಯ ಸರ್ಕಾರ ಉಳಿದ ಶೇಕಡ 40 ರಷ್ಟು ಮಾತ್ರ ಭರಿಸುತ್ತಿರುವುದರಿಂದ, ಕಾರ್ಯಕ್ರಮ ಅನುಷ್ಠಾನದಲ್ಲಿ ರಾಜ್ಯವು ಕೇಂದ್ರ ಸರ್ಕಾರದ ಮಾರ್ಗಸೂಚಿಗಳನ್ನು ಈ ಸಂಬಂಧ ಕಡ್ಡಾಯವಾಗಿ ಪಾಲಿಸಬೇಕಾಗಿರುತ್ತದೆ.

7) ಭಾರತ ಸರ್ಕಾರದ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಮಾರ್ಗಸೂಚಿ (2020-21 ರಿಂದ 2025-26ರ ವರೆಗೆ) ರೀತ್ಯಾ 2021-22ನೇ ಸಾಲಿನಲ್ಲಿ ವಿದ್ಯಾರ್ಥಿವೇತನ ಕಾರ್ಯಕ್ರಮದಡಿ ಮಂಜೂರು ಮಾಡಲಾದ ಸಂಪೂರ್ಣ ಮೊತ್ತವನ್ನು ವಿದ್ಯಾರ್ಥಿಯ ಆಧಾರ್ ಜೋಡಿತ ಬ್ಯಾಂಕ್ ಖಾತೆಗೆ ನೇರವಾಗಿ ಜಮೆ ಮಾಡಲಾಗುತ್ತಿದೆ.

**ಸಂಖ್ಯೆ: ಸಕಇ 512 ಪಕವಿ 2022**

**(ಶ್ರೀ ಕೋಟಾ ಶ್ರೀನಿವಾಸ ಪೂಜಾರಿ)**
ಸಮಾಜ ಕಲ್ಯಾಣ ಹಾಗೂ ಹಿಂದುಳಿದ
ವರ್ಗಗಳ ಕಲ್ಯಾಣ ಸಚಿವರು

330 - 13